**RPAD**

## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ- ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/404/ಗ್ರಾಪಂಕಾ/2015, ದಿನಾಂಕ:01–09–2015.
2. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE-468/2015/ARE-8, ದಿನಾಂಕ:25–07–2018.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE-468/2015/ARE-8, ದಿನಾಂಕ:27–07–2018.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: Uplok-2/DE-468/2015/ARE-8, ದಿನಾಂಕ:28–07–2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:404ಗ್ರಾಪಂಕಾ:2015, ದಿನಾಂಕ:01–09–2015 ರಲ್ಲಿ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ"

"Sri B.C. Manjappa, Panchayath Development Officer, Kittadahalli Gram Panchayath, Shikaripura Taluk, Shivamoga District have without selecting 42 persons as beneficiaries in the Grama Sabha held on 14-10-2012 illegally regularized the sites on which 42 persons were illegally residing in the Gomal land by collecting temporary tax and providing basic amenities like water, electricity and road without any authority under the guise that, those 42 persons were in possession of the said land since 15 years, and thereby, DGO have misused your power by regularizing the said Gomal land to those 42 persons who are not at all the beneficiaries and thereby DGO failed to maintain absolute integrity and devotion to duty, the act of which is unbecoming of Government Servant and committed misconduct as enumerated under Rule 3(1) (i), (ii) & (iii) of Karnataka Civil Services (Conduct) Rules, 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ಪ್ರಕರಣದಲ್ಲಿ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರದ ಕಾರಣ ವಿಚಾರಣಾ ಪ್ರಕ್ರಿಯೆಯನ್ನು ಕೈಬಿಟ್ಟಿರುತ್ತಾರೆ ಎಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ತಿಳಿಸಿರುವುದಾಗಿ ಅಪರ ನಿಬಂಧಕರು, ವಿಚಾರಣೆಗಳು–8 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ಪತ್ರದಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-8 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುತ್ತಾರೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 386 ಗ್ರಾಪಂಕಾ 2018, ಬೆಂಗಳೂರು, ದಿನಾಂಕ:22-10-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುತ್ತಾರೆ ಎಂದು ತಿಳಿಸಿರುವುದರಿಂದ ಸರ್ಕಾರವು ಸದರಿ ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

23/x

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಶಿವಮೊಗ್ಗ, ಶಿವಮೊಗ್ಗ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಶಿಕಾರಿಪುರ, ಶಿವಮೊಗ್ಗ ಜಿಲ್ಲೆ.
7. ಶ್ರೀ ಬಿ.ಸಿ.ಮಂಜಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಿಟ್ಟದಹಳ್ಳಿ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.